# ಸಂಸತ್‌ನಲ್ಲಿ ಅಡಕೆ ಬೆಳೆಗಾರರ ಪರ ದನಿ ಎತ್ತುವೆ




»ಜನಮಾಧ್ಯಮ, ಶಿರಸಿ: ರಾಜ್ಯ ಸರ್ಕಾರವು ಅಡಕೆ ಬೆಳೆಗಾರರ ನೆರವಿಗೆ ಬರಲೇಬೇಕಿದೆ. ಕೇವಲ ರಾಜ್ಯ ಸರ್ಕಾರದಿಂದ ಮಾತ್ರ ಸಾಧ್ಯವಾಗಿದ್ದರೆ ಕೇಂದ್ರಕ್ಕೆ ಅಡಕೆ ಬೆಳೆಗಾರರ ಪರವಾಗಿ ಶಿಫಾರಸು ಮಾಡಲಿ. ಅಡಕೆ ಬೆಳೆಯುವ ಕ್ಷೇತ್ರಗಳ ಸಂಸದರು ನಾವು ಸಂಸತ್‌ನಲ್ಲಿ ಅಡಕೆ ಬೆಳೆಗಾರರ ಪರವಾಗಿ ಮಾತನಾಡಲಿದ್ದೇವೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ವಿಶ್ವಾಸ ವ್ಯಕ್ತಪಡಿಸಿದರು.

ಅವರು ಶನಿವಾರ ನಗರದ ಟಿಆರ್‌ಸಿ ಸಭಾಭವನದಲ್ಲಿ ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆ ಹಾಗೂ ಅಡಿಕೆ ಮತ್ತು ಸಾಂಬಾರು ಬೆಳೆಗಳ ಅಭಿವೃದ್ಧಿ ನಿರ್ದೇಶನಾಲಯದ ಸಹಕಾರದಲ್ಲಿ ಅಡಕೆ ಹಾಗೂ ಕಾಳು ಮೆಣಸಿನಲ್ಲಿ ರೋಗ ಮತ್ತು ಕೀಟ ನಿರ್ವಹಣೆಗೆ ಸುಸ್ಥಿರ ಬೇಸಾಯ ಕ್ರಮಗಳು ಹಾಗೂ ಉಪ ಬೆಳೆಗಳ ಕುರಿತ ಮಾಹಿತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಅಡಕೆ ಬೆಳೆಗಾರರ ನೆರವಿಗೆ ಬರಲು ಜಿಲ್ಲೆಯಲ್ಲಿ ಸಹಕಾರಿ ಸಂಘಗಳು, ರೈತ ಸಮುದಾಯ ಕೃಷಿ ಕುರಿತ ಚಿಂತನ ನಡೆಸುತ್ತಿವೆ. ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಯತ್ನವೂ ಆಗುತ್ತದೆ. ಆದರೆ, ಈಗ ಎದುರಿಸುತ್ತಿರುವ ಸಮಸ್ಯೆ ಸ್ಥಳೀಯ ಸಹಕಾರಿ ಸಂಘಗಳಿಂದ ಮಾತ್ರ ಪರಿಹಾರವಾಗುವಂಥದ್ದಲ್ಲ. ಅಡಕೆ ಬೆಳೆ ಮುಂದೆ ಅನೇಕ ಸವಾಲುಗಳಿವೆ. ಅಡಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ

»» ಪುಟ 2

ಅಡಕೆ ಬೆಳೆಗಾರರು ವಿವಿಧ ರೀತಿಯ ಸಂಕಷ್ಟದಲ್ಲಿದ್ದಾರೆ. ಸರ್ಕಾರ ನೆರವಿಗೆ ಬರುವಂತೆ ಜನಾಭಿಪ್ರಾಯ ರೂಪಿಸುವ ಮೂಲಕ ಒತ್ತಡ ತರಬೇಕಾದ ಅಗತ್ಯ ಇದೆ.

**● ವಿಶ್ವೇಶ್ವರ ಹೆಗಡೆ ಕಾಗೇರಿ, ಸಂಸದ**

ಬಯಲುಸೀಮೆ ತಾಲೂಕುಗಳೂ ಶಿರಸಿಯನ್ನು ಮೀರಿಸುವ ಮಟ್ಟದಲ್ಲಿ ಬೆಳೆಯಲಿವೆ. ಹೀಗಾಗಿ, ರೈತರು ಬದಲಿ ಬೆಳೆಯ ಬಗ್ಗೆಯೂ ಈಗಲೇ ಚಿಂತನೆ ನಡೆಸಬೇಕಿದೆ.

**● ಶಿವರಾಮ ಹೆಬ್ಬಾರ್,**
ಯಲ್ಲಾಪುರ ಶಾಸಕ

ಸಿಪಿಸಿಆರ್ಐ ನಿರ್ದೇಶಕ ಬಾಲಚಂದ್ರ ಹೆಬ್ಬಾರ್ ಪ್ರಾಸ್ತಾವಿಕ ಮಾತನಾಡಿ, ಅಡಕೆಯಲ್ಲಿ ಕುಬ್ಜ ತಳಿ ಸಂಶೋಧನೆ ಆಗಿದ್ದರೂ ನಿರೀಕ್ಷಿತ ಫಸಲು ಇರಲಿಲ್ಲ. ಪ್ಲಾಂಟೇಶನ್ ಕ್ರಾಪ್ ಗಳಲ್ಲೂ ಹವಾಮಾನ ವೈಪರೀತ್ಯದಿಂದಾಗಿ ಕೆಲ ರೋಗ ತಿಳಿಯುವುದಕ್ಕೂ ಮುನ್ನವೇ ವೇಗವಾಗಿ ಹಬ್ಬುತ್ತಿದೆ. ಎಲೆಚುಕ್ಕಿ ರೋಗ ಇದೇ ಮಾದರಿಯಲ್ಲಿ ಹಬ್ಬಿದೆ. ಎಲೆ ಚುಕ್ಕಿ ನಿಯಂತ್ರಣಕ್ಕೆ ನಾವು ತೋಟವನ್ನು ಯಾವ ರೀತಿ ನಿರ್ವಹಣೆ ಮಾಡಬೇಕು ಎಂಬುದೂ ಮುಖ್ಯವಾಗುತ್ತದೆ. 25 ಡಿಗ್ರೀ ತಾಪಮಾನ, ಶೇ.75 ಕ್ಕಿಂತ ಜಾಸ್ತಿ ಆರ್ದ್ರತೆ ಇದ್ದ ವಾತಾವರಣದಲ್ಲಿ ಎಲೆ ಚುಕ್ಕಿ ಜಾಸ್ತಿ ಪ್ರಸಾರವಾಗಿದೆ. ಹೊಸ ಎಲೆ ಜಾಸ್ತಿ ಬರುವಂತೆ ಮತ್ತು ಎಲೆ ಚುಕ್ಕಿ ಹೊಸ ಎಲೆಗೆ ಹಬ್ಬದಂತೆ ನೋಡಿಕೊಳ್ಳಬೇಕು. ಚೈನೀಸ್ ರಿಂಗ್ ಸ್ಪಾಟ್ ವೈರಸ್ ಉತ್ತರಕನ್ನಡ, ಬೆಳ್ತಂಗಡಿಯಲ್ಲೂ ಕಾಣಿಸಿಕೊಂಡಿದೆ. ಈ ವೈರಸ್ ಬಗ್ಗೆ ಇನ್ನಷ್ಟು ಶೋಧ ಆಗಬೇಕು. ಹರಡುವಿಕೆಯ ಕೀಟ ಯಾವುದು ಎಂಬುದನ್ನು ಶೋಧ ಮಾಡುತ್ತಿದ್ದೇವೆ. ಅಡಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ಆರೋಪ ಸದಾ ಕೇಳಿಬರುತ್ತಿದೆ. ಬೇರೆ ವಸ್ತುಗಳ ಜೊತೆ ಮಿಶ್ರಣ ಮಾಡಿ ಅಡಕೆ ಬಳಸುವುದರಿಂದ ಆರೋಗ್ಯ ಸಮಸ್ಯೆ ಉಂಟಾಗಿದೆ ಹೊರತೂ ಅಡಕನ್ನಷ್ಟೇ ಬಳಸಿದವರು ಆರೋಗ್ಯವಾಗಿದ್ದಾರೆ. ಈ ಕುರಿತೂ ಸಂಶೋಧನೆ ನಡೆಸಲಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಟಿಎಸ್ಎಸ್ ಅಧ್ಯಕ್ಷ ಗೋಪಾಲಕೃಷ್ಣ ವೈದ್ಯ, ಟಿಎಂಎಸ್ ಅಧ್ಯಕ್ಷ ಜಿ.ಟಿ.ಹೆಗಡೆ ತಟ್ಟಿಸರ, ಟಿಆರ್‌ಸಿ ಅಧ್ಯಕ್ಷ ಶ್ರೀಪಾದ ಹೆಗಡೆ ಕಡವೆ, ಸಾಂಬಾರು ಮಂಡಳಿ ಉಪನಿರ್ದೇಶಕ ಬಾಬುಲಾಲ್ ಮೀನಾ, ಶಂಭುಲಿಂಗ ಹೆಗಡೆ, ಸತೀಶ ಹೆಗಡೆ, ರೂಪಾ ಪಾಟೀಲ ಮತ್ತಿತರರು ಇದ್ದರು.

# ಅಡಕೆ ಬೆಳೆಗಾರರ ಪರ ದನಿ ಎತ್ತುವೆ

ಆರೋಪ ಇರುವುದರಿಂದ ಈ ತೊಡಕನ್ನು ಮೊದಲು ನಿವಾರಿಸಬೇಕಿದೆ. ಅಡಕೆ ಆರೋಗ್ಯಕ್ಕೆ ಹಾನಿಕಾರಕ ಅಲ್ಲ ಎಂಬ ಅಂಶವನ್ನು ವಿಶ್ವಆರೋಗ್ಯ ಸಂಸ್ಥೆಗೂ ಮನವರಿಕೆ ಮಾಡಿಕೊಡಬೇಕಿದೆ. ಹೀಗಾಗಿ, ಅಡಕೆ ಆರೋಗ್ಯಕ್ಕೆ ಹಾನಿಕಾರಕ ಅಲ್ಲ ಎಂಬುದನ್ನು ದೃಢಪಡಿಸುವ ಸಂಶೋಧನೆಗಾಗಿ ಕೇಂದ್ರ ಸರ್ಕಾರ 10 ಕೋಟಿ ರೂ. ನೆರವು ನೀಡಿದೆ ಎಂದರು.

ಇನ್ನೊಂದೆಡೆ ಅಡಕೆ ಬೆಳೆ ವಿಸ್ತರಣೆ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗುತ್ತಿದೆ. ರಾಜ್ಯದ ಬೇರೆ ಜಿಲ್ಲೆಗಳಲ್ಲಿಯೂ ನೂರು ಇನ್ನೂರು ಎಕರೆ ಲೆಕ್ಕದಲ್ಲಿ ಅಡಕೆ ಬೆಳೆಯುತ್ತಿದ್ದಾರೆ. ಅಡಕೆ ವಿಸ್ತರಣೆ ಬಗ್ಗೆ ಗಂಭೀರವಾಗಿ ಚಿಂತಿಸಬೇಕಾಗಿದೆ. ಮಲೆನಾಡಿನವರಾದ ನಮಗೆ ಅಡಕೆ ಬಿಟ್ಟರೆ ಬೇರೆ ಬೆಳೆ ಇಲ್ಲ. ಹೀಗಾಗಿ, ಹೊರಗಿನ ಜಿಲ್ಲೆ, ರಾಜ್ಯದ ರೈತರಿಗೆ ಆದಾಯ ಜಾಸ್ತಿ ಬರುವ ಬೇರೆ ಬೆಳೆ ಬಗ್ಗೆ ತಿಳಿಸಿ, ಬೆಳೆಯಲು ಉತ್ತೇಜಿಸಬೇಕಾಗಿದೆ. ಇನ್ನೊಂದೆಡೆ ಅಡಕೆಯ ಅಕ್ರಮ ಆಮದೂ ಸಹ ಮಾರುಕಟ್ಟೆ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಅಡಕೆ ಆಮದು ದರವನ್ನು ಕೇಂದ್ರ ಸರ್ಕಾರ 350 ರೂ ನಿಗದಿಮಾಡಿ ಅದರ ಮೇಲೆ ಶೇ. 200 ರಷ್ಟು ತೆರಿಗೆ ವಿಽಸಿದೆ ಆದರೆ ಅಕ್ರಮವಾಗಿ ದೇಶದೊಳಗೆ ತರುತ್ತಿರುವುದು ಸಮಸ್ಯೆ ಆಗಿದೆ. ಕೇಂದ್ರ ಸರ್ಕಾರ ಗಡಿ ಬಿಗಿಗೊಳಿಸಿ, ಅಕ್ರಮ ಸಾಗಾಟ ನಿಯಂತ್ರಿಸಲು ಯತ್ನಿಸಿದ್ದರೂ ಶಿರಸಿ ಮಾರುಕಟ್ಟೆಯವರೆಗೂ ವಿದೇಶಿ ಅಡಕೆ ಬರುತ್ತಿದೆ. ಅಡಕೆ ನಿಯಂತ್ರಣ ಸವಾಲಿನ ವಿಷಯ. ರಾಜ್ಯ, ಕೇಂದ್ರ ಸೇರಿ ಹೇಗೆ ನಿಯಂತ್ರಣ ಮಾಡಬಹುದು ಎಂಬ ಬಗ್ಗೆ ಚಿಂತನೆ ನಡೆಸಬೇಕಿದೆ. ಅದೇ ರೀತಿ ಅಡಕೆ ಕೃಷಿಯಲ್ಲೂ ಯಂತ್ರೋಪಕರಣಗಳ ಇನ್ನಷ್ಟು ಶೋಧನೆ ನಡೆಸಿ ಖರ್ಚನ್ನೂ ಕಡಿಮೆಗೊಳಿಸಬೇಕಾಗಿದೆ ಎಂದರು.

ಕೆಡಿಸಿಸಿ ಬ್ಯಾಂಕ್ ಅಧ್ಯಕ್ಷ ಹಾಗೂ ಯಲ್ಲಾಪುರ ಶಾಸಕ ಶಿವರಾಮ ಹೆಬ್ಬಾರ್ ಮಾತನಾಡಿ, ರೈತರಲ್ಲಿರುವ ಕೃಷಿ ಜ್ಞಾನ ಕೃಷಿ ವಿಜ್ಞಾನಿಗಳಿಗೂ ತಲುಪಬೇಕು. ಬೆಳೆಗಳಿಗೆ ಯೋಗ್ಯ ಬೆಲೆ ಸಿಕ್ಕರೆ ರೈತರೂ ಸಾಲ ಮನ್ನಾ ಬಗ್ಗೆ ಆಗ್ರಹಿಸುವುದಿಲ್ಲ. ಅಡಕೆ ಬೆಳೆಗಾರರಿಗೆ ಈ ವರ್ಷ ಕಷ್ಟದ ಕಾಲ. ಅತಿ ಮಳೆಯಿಂದ ಅಡಕೆ ಬೆಳೆಗಾರರು ಕಷ್ಟಕ್ಕೆ ಬಿದ್ದಿದ್ದಾರೆ. ಆಂಧ್ರ, ತಮಿಳುನಾಡಿನಲ್ಲಿ 46 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಅಡಕೆ ಬೆಳಯಲಾಗಿದ್ದು ಇನ್ನೆರಡು ವರ್ಷಗಳಲ್ಲಿ ಫಸಲು ಬರಲಿದೆ ಎಂದರು.